**<u>ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಂಡಾಧಿಕಾರಿಗಳ ನ್ಯಾಯಾಲಯ, ಪೊನ್ನಂಪೇಟೆ.</u>**

**<u>ಸಿ.ಸಿ.ನಂ.335/2026</u>**

**ಪಿರ್ಯಾದಿ** : ರಾಜ್ಯ ಸರ್ಕಾರ,
ಗೋಣಿಕೊಪ್ಪ ಪೋಲೀಸ್ ಠಾಣೆ.

**ವಿರುದ್ದ**

**ಆರೋಪಿ** : ಶ್ರೀ. ತೀರ್ಥ ಪ್ರಸಾದ್ ಸಿ.ಎನ್,
ತಂದೆಃ ನಿಂಗಪ್ಪ,
ಪ್ರಾಯ 21 ವರ್ಷ
ವಾಸಃ ಚಿಕ್ಕ ಬೆಳಾಳು ಗ್ರಾಮ,
ದೊಡ್ಡಬೆಳಾಳು ಅಂಚೆ,
ರಾವಂದೂರು ಹೋಬಳಿ,
ಪಿರಿಯಾಪಟ್ಟಣ ತಾಲ್ಲೂಕು, ಮೈಸೂರು ಜಿಲ್ಲೆ.

**<u>ಆರೋಪಣೆ</u>**

ಶ್ರೀ ಶ್ರೀನಾಥ್ ಎ,. ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ ಆದ ನಾನು ಆರೋಪಿತರಾದ ನಿಮ್ಮ ಮೇಲೆ ದೋಷಾರೋಪಿಸುವುದೇನೆಂದರೆಃ

ದಿನಾಂಕ 13.12.2025 ರಂದು ಸಮಯ ಸಂಜೆ 4.15 ಗಂಟೆಗೆ ಗೋಣಿಕೊಪ್ಪ ಪೋಲೀಸ್ ಠಾಣಾ ಸರಹದ್ದಿಗೆ ಸೇರಿದ ಶಕ್ತಿ ಎಲೆಕ್ಟ್ರಿಕಲ್ಸ್ ಮುಂಭಾಗದ ಗೋಣಿಕೊಪ್ಪ - ಪೊನ್ನಂಪೇಟೆ ರಾಜ್ಯ ಹೆದ್ದಾರಿ 89 ರಲ್ಲಿ ಸಾಕ್ಷಿ 2 ಅಬ್ದುಲ್ ರವರು ಸಾಕ್ಷಿ 5 ಸಾನಿಯಾ ಅರ್ಶಿನ್ ರವರಿಗೆ ಸೇರಿದ ಕೆಎ.12.ವೈ.0863 ರ ಹೋಂಡಾ ಆಕ್ಟೀವಾ ಸ್ಕೂಟರನ್ನು ಚಾಲನೆ ಮಾಡಿಕೊಂಡು ಸಾಕ್ಷಿ 1 ರವರನ್ನು ಹಿಂಬದಿ ಸೀಟಿನಲ್ಲಿ ಕೂರಿಸಿಕೊಂಡು ಸ್ಕೂಟರ್ ಇಂಡಿಕೇಟರ್ ಹಾಕಿ ಸ್ಕೂಟರನ್ನು ಬಲಕ್ಕೆ ತಿರುಗಿಸಲು ಹೋದಾಗ ಆರೋಪಿಯಾದ ನೀವು ಹಿಂಬದಿಯಿಂದ ಕೆಎ.45.ಇಸಿ.2615ರ ಯಮಹಾ ಎಫ್.ಜೆಡ್ ಮೋಟಾರ್ ಸೈಕಲನ್ನು ಅತಿವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಬಂದು ರಸ್ತೆಯ ಮಧ್ಯದಲ್ಲಿ ಹಿಂಬದಿಯಿಂದ ಸಾಕ್ಷಿ 2 ರವರು ಚಾಲನೆ ಮಾಡುತ್ತಿದ್ದ ಸ್ಕೂಟರಿಗೆ ಡಿಕ್ಕಿ ಪಡಿಸಿ ಅಪಘಾತ ಪಡಿಸಿರುತ್ತೀರಿ ಎಂಬುದಾಗಿರುತ್ತದೆ, ಆ ಕಾರಣ ಬಿ.ಎನ್.ಎಸ್ ಕಲಂ 281 ರಡಿಯಲ್ಲಿ ದಂಡಿಸಲ್ಪಡುವ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆತೆಯಲ್ಲಿ ಎಸಗಿರುತ್ತೀರೆಂದು ನಿಮ್ಮ ಮೇಲೆ ಆಪಾದಿಸಲಾಗಿದೆ.

ಎರಡನೆಯದಾಗಿ, ಮೇಲೆ ಹೇಳಲಾದ ದಿನ, ಸ್ಥಳ, ಸಮಯ ಮತ್ತು ಸಂದರ್ಭದಲ್ಲಿ ಆರೋಪಿಯಾದ ನೀವು ಸದರಿ ಅಪಘಾತ ಪಡಿಸಿದ ಪರಿಣಾಮ ಸಾಕ್ಷಿ 1 ಮತ್ತು ಸಾಕ್ಷಿ 2 ರವರು ಸ್ಕೂಟರ್ ಸಮೇತ ರಸ್ತೆಗೆ ಬಿದ್ದು ಸಾಕ್ಷಿ 1 ರವರ ಎಡ ಕಾಲಿನ ಮೊಣಕಾಲಿನ ಹತ್ತಿರ ಮೂಳೆ ಮುರಿತವಾಗಿ ಗಂಭೀರ ಸ್ವರೂಪದ ಗಾಯಗಳಾಗಿದ್ದು, ಆ ಕಾರಣ ಬಿ.ಎನ್.ಎಸ್ ಕಲಂ 125(ಬಿ)

ರಡಿಯಲ್ಲಿ ದಂಡಿಸಲ್ಪಡುವ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆತೆಯಲ್ಲಿ ಎಸಗಿರುತ್ತೀರೆಂದು ನಿಮ್ಮ ಮೇಲೆ ಆಪಾದಿಸಲಾಗಿದೆ.

ಪ್ರಶ್ನೆ 1: ನಿಮಗೆ ಓದಿ ಹೇಳಲಾದ ಆರೋಪವನ್ನು ಅರ್ಥಮಾಡಿಕೊಂಡಿದ್ದೀರಾ?

ಉತ್ತರ :ಅರ್ಥವಾಯಿತು.

ಪ್ರಶ್ನೆ 2: ನಿಮ್ಮ ಮೇಲೆ ಹೊರಿಸಲಾದ ಆರೋಪವನ್ನು ಒಪ್ಪಿಕೊಳ್ಳುತ್ತೀರಾ ಅಥವಾ ವಿಚಾರಣೆಯಾಗಲೇಬೇಕೆ?

ಉತ್ತರ: ತಪ್ಪಾಯಿತು, ದಂಡ ಕಟ್ಟುತ್ತೇನೆ.

ಮೇಲ್ಕಂಡ ಎಲ್ಲಾ ಆಪಾದನೆಗಳನ್ನು ನನ್ನ ಸಮಕ್ಷಮ ಓದಿ ಹೇಳಿ ಅವರ ಹೇಳಿಕೆಯನ್ನು ಪಡೆದುಕೊಂಡು ಸತ್ಯವಾಗಿದೆ ಎಂದು ದೃಢೀಕರಿಸುತ್ತೇನೆ.

ಸ್ಥಳಃ ಪೊನ್ನಂಪೇಟೆ,
ದಿಃ-17-04-2026

Sd/-
**ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ**
**ಪೊನ್ನಂಪೇಟೆ.**